# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ವಾ/ಸ.ಅ.ಪಾ.121
ವಾರ್ಡ್ ಸಮಿತಿ ಸಭೆ/ಸಂಖ್ಯೆ.299/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ: 19/02/2021

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

**ವಿಷಯ:-** ದಿನಾಂಕ. 20.02.2021ರಂದು ಬೆಳಿಗ್ಗೆ 11.00 ಗಂಟೆಗೆ ಕಾಟನ್‌ಪೇಟೆ ಉಪವಿಭಾಗ ವಾರ್ಡ್ ಸಂಖ್ಯೆ. 121ರ ಕಛೇರಿಯಲ್ಲಿ ನಡೆಯುವ ಸಭೆಗೆ ಹಾಜರಾಗುವ ಬಗ್ಗೆ.

**ಉಲ್ಲೇಖ:-** 1) ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020-21 ದಿನಾಂಕ. 21.09.2020.

**************

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಮಸ್ಯೆಗಳು ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ವಾರ್ಡ್ ಸಂಖ್ಯೆ. 121ರ ಕಾಟನ್‌ಪೇಟೆ ಉಪವಿಭಾಗಕ್ಕೆ ಸಂಬಂಧಿಸಿದ ಮಾಹಿತಿಗಳೊಂದಿಗೆ ದಿನಾಂಕ. 20.02.2021ರ ಶನಿವಾರ ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ಸಂಖ್ಯೆ. 121ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿಗೆ ಹಾಜರಾಗಲು ಸೂಚಿಸಿದೆ.

ಸಂಚಾಲಕರು / ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ವಾರ್ಡ್ ಸಮಿತಿ / ಕಾಟನ್‌ಪೇಟೆ ಉಪವಿಭಾಗ / ಬಿನ್ನಿಪೇಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

1. ಶ್ರೀ ರಾಜಣ್ಣ, ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
2. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಾಟನ್‌ಪೇಟೆ ಉಪವಿಭಾಗ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್, ಬಿಬಿಎಂಪಿ ಸಂಕೀರ್ಣ.
3. ಆರೋಗ್ಯ ವೈದ್ಯಾಧಿಕಾರಿಗಳು, ಮಾಗಡಿ ರಸ್ತೆ.
4. ಸಹಾಯಕ ನಿರ್ದೇಶಕರು, ನಗರ ಯೋಜನೆ ಪಶ್ಚಿಮ, ಬಿಬಿಎಂಪಿ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಘನತ್ಯಾಜ್ಯ, ನಿರ್ವಹಣಾ ವಿಭಾಗ, ಪಶ್ಚಿಮ ಬಿಬಿಎಂಪಿ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಿಜಯನಗರ, ಬೆಂಗಳೂರು
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ, ಮಾಗಡಿ ರಸ್ತೆ, ಬೆಂಗಳೂರು
8. ಕಲ್ಯಾಣಾಧಿಕಾರಿಗಳು, ಪಶ್ಚಿಮ ವಲಯ ಬಿಬಿಎಂಪಿ.
9. ಪೋಲೀಸ್ ಠಾಣಾಧಿಕಾರಿಗಳು, /ಸಂಚಾರಿ ಪೋಲೀಸ್ ಠಾಣೆ, ಮಾಗಡಿ ರಸ್ತೆ, ಬೆಂಗಳೂರು
10. ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳು.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ.297/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 20/2/21

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:-** ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ. ಬಿ12(5)ಪಿ.ಆರ್/35/2020-21, ದಿನಾಂಕ. 21.09.2020ರ ಆದೇಶದಂತೆ ದಿ. 20.02.2021ರಂದು ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಸ್ಥಳ:** ಬಿಬಿಎಂಪಿ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್,
**ಸಮಯ:** ಬೆಳಿಗ್ಗೆ 11.00 ಗಂಟೆಗೆ
**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| | | |
|---|---|---|
| 1 | ಶ್ರೀ ರಾಜಣ್ಣ, | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ ಕೆ.ಬಿ ತಾರಾನಾಥ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, |
| 3 | ಶ್ರೀ ವಿ.ಆರ್.ಕೃಷ್ಣಪ್ಪ | ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು |
| 4 | ಶ್ರೀ ಶಶಿಕುಮಾರ್ | ಆರೋಗ್ಯ ಪರೀವೀಕ್ಷಕರು |
| 5 | ಶ್ರೀ ಭರತ್ ಎಸ್ | ಕೆಂಪೇಗೌಡ ಸಾಂಸ್ಕೃತಿಕ ಸಂಘದ ಸದಸ್ಯರು |
| 6 | ಶ್ರೀ ರಘು | ಸದಸ್ಯರು |
| 7 | ಶ್ರೀ ಮಹೇಶ್ ಬಿ | ಸದಸ್ಯರು |
| 8 | ಶ್ರೀಮತಿ ಡಾ|| ಮಣಿ | ಹೆಲ್ಪಿಂಗ್ ಹ್ಯಾಂಡ್ಸ್ ಅಸೋಸಿಯೇಟ್ಸ್ ಸದಸ್ಯರು |
| 9 | ಶ್ರೀಮತಿ ವಿ. ಸುಶೀಲ | ಸದಸ್ಯರು |
| 10 | ಶ್ರೀ ಎಸ್. ಗುಣ | ಸದಸ್ಯರು |
| 11 | ಶ್ರೀ ಜಿ. ಪ್ರವೀಣ್ ಕುಮಾರ್ ನಾಯ್ಡು | ಸದಸ್ಯರು |
| 12 | ಶ್ರೀ ಮಹೇಶ್ ಬಿ.ಎನ್. | ಸಂಘದ ಸದಸ್ಯರು |
| 13 | ಸಹ ಕಂದಾಯ ಅಧಿಕಾರಿ, | ಚಿಕ್ಕಪೇಟೆ ಉಪವಿಭಾಗ |
| 14 | ಪೋಲೀಸ್ ಠಾಣಾಧಿಕಾರಿ | ಕೆ.ಪಿ ಅಗ್ರಹಾರ, ಮಾಗಡಿ ರಸ್ತೆ, ಮಾಗಡಿ ರಸ್ತೆ ಸಂಚಾರಿ ಪೋಲೀಸ್ ಠಾಣೆ ಅಧಿಕಾರಿಗಳು |
| 15 | ಸಂಘ ಸಂಸ್ಥೆಗಳ ಸದಸ್ಯರು | |

ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಈ ಕೆಳಕಂಡ ಅಂಶಗಳನ್ನು ಚರ್ಚಿಸಲಾಯಿತು.

Scanned with CamScanner

ಹಿಂದಿನ ಸಭೆಯ ನಡವಳಿಗಳನ್ನು ಪರಿಶೀಲಿಸಲಾಯಿತು.

1. ಕಾನೂನು ಸುವ್ಯವಸ್ಥೆ ಕೆ.ಪಿ ಅಗ್ರಹಾರ ಠಾಣೆಯವರು ಗೋಪಾಲಪುರ, ಅಗ್ರಹಾರ ಮತ್ತು ಕೆಲವು ಸ್ಥಳಗಳಲ್ಲಿ, ರಾತ್ರಿ ವೇಳೆ ಹೊಯ್ಸಳ ವಾಹನದಲ್ಲಿ ಗಸ್ತು ತಿರುಗಲು ಹಾಗೂ ಕಳ್ಳತನಗಳನ್ನು ತಡೆಯಲು ಸೂಕ್ತ ಕ್ರಮ ಕೈಗೊಳ್ಳಲು ಪೋಲೀಸ್ ಠಾಣೆ ಅಧಿಕಾರಿಗಳಿಗೆ ತಿಳಿಸಲಾಗಿ ಪೋಲೀಸ್ ಅಧಿಕಾರಿಯವರು ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ.
2. ಮಾಗಡಿ ರಸ್ತೆ, 2ನೇ ಕ್ರಾಸ್‌ನಲ್ಲಿ ಇ.ಎ.ಸಿ ರಸ್ತೆ ಅನಧಿಕೃತವಾಗಿ ಕಟ್ಟಿ ನಿಂತಿರುವ ವಾಹನಗಳನ್ನು ತೆಗೆಯಲು ಕ್ರಮ ಕೈಗೊಳ್ಳಲು ಟ್ರಾಫಿಕ್ ಠಾಣಾಧಿಕಾರಿಗಳಿಗೆ ತಿಳಿಸಲಾಯಿತು.
3. ಇ.ಟಿ.ಎ ಮಾಲ್ ಹತ್ತಿರ ಬನಶಂಕರಿ ಟ್ರಾವೆಲ್ಸ್‌ನ ಹಳೇ ವಾಹನಗಳನ್ನು ನಿಲ್ಲಿಸುತ್ತಿರುವ ಬಗ್ಗೆ ಕ್ರಮ ಕೈಗೊಳ್ಳಲು ಟ್ರಾಫಿಕ್ ಸ್ಟೇಷನ್ ಅಧಿಕಾರಿಗಳಿಗೆ ತಿಳಿಸಲಾಯಿತು.
4. 4ನೇ ಕ್ರಾಸ್, ಕೃಷ್ಣಪ್ಪ ಬಾರ್ ರಸ್ತೆ, ಹತ್ತಿರ ಇರುವ ಡೆಬ್ರಿಸ್‌ನ್ನು ತೆರವುಗೊಳಿಸುವಂತೆ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.
5. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಇರುವ ಚರಂಡಿಯಲ್ಲಿ ಹೂಳು ತೆಗೆಯುವುದು ಮತ್ತು ಇತರೆ ಕಸವನ್ನು ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತು.
6. ರಸ್ತೆ ಬದಿಯಲ್ಲಿ ಇರುವ ಮಣ್ಣುಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.
7. ಮಾಗಡಿ ರಸ್ತೆ, 3ನೇ ಕ್ರಾಸ್‌ನ ರಸ್ತೆಗಳು ದುರಸ್ಥಿಗೊಂಡಿದ್ದು, ಸದರಿ ಗುಂಡಿಗಳನ್ನು ಶೀಘ್ರವಾಗಿ ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
8. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಸೊಳ್ಳೆಯ ಔಷಧಿ ಸಿಂಪಡಣೆ ಕಾರ್ಯಗಳನ್ನು ಸಮರ್ಪಕವಾಗಿ ಕೈಗೊಳ್ಳುವ ಬಗ್ಗೆ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಯಿತು.
9. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ನಿರ್ಣಯ:-**

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತಿರ್ಮಾನಿಸಿತ್ತು.

ಕಾರ್ಯದರ್ಶಿಗಳು
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಾರ್ಡ್ ಸಂಖ್ಯೆ 121, ಬಿನ್ನಿಪೇಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು, (ಆರೋಗ್ಯ ಮತ್ತು ಘ.ತ್ಯಾ.ನಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಸಮಿತಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner